## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 1061 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:20-02-2020.

## ಸುತ್ತೋಲೆ

ವಿಷಯ: 2020-21ನೇ ಸಾಲಿನಲ್ಲಿ ಶಾಲೆಯಿಂದ ಹೊರಗುಳಿದಿರುವ ಮಕ್ಕಳನ್ನು ಗುರುತಿಸಿ, ಹಾಜರಾಗುವಂತೆ ಮಾಡಲು ಸ್ಥಳೀಯ ಸಂಸ್ಥೆಗಳು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ

ಉಲ್ಲೇಖ:
1) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 1061 ಗ್ರಾಪಂಅ 2019, ದಿನಾಂಕ: 11.12.2019.
2) ಸರ್ಕಾರದ ಇದೇ ಸಮ ಸಂಖ್ಯೆಯ ಪತ್ರ ದಿನಾಂಕ: 16.12.2019.
3) ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:15768/2013 ರ ವಿಚಾರಣೆ ಸಂದರ್ಭದಲ್ಲಿ ನೀಡಿದ ಆದೇಶ ದಿನಾಂಕ18.12.2019.

**********

ಭಾರತ ಸಂವಿಧಾನದ ಕಲಂ 21(ಎ) ಪ್ರಕಾರ 6 ರಿಂದ 14 ವರ್ಷದ ಪ್ರತಿ ಮಗು 8 ವರ್ಷಗಳ ಶಾಲಾ ಶಿಕ್ಷಣವನ್ನು ಪಡೆಯುವುದು ಮೂಲಭೂತ ಹಕ್ಕಾಗಿರುತ್ತದೆ. ಉಲ್ಲೇಖ (1) ರ ಸುತ್ತೋಲೆ ಮತ್ತು ಉಲ್ಲೇಖ (2) ರ ಸರ್ಕಾರದ ಪತ್ರದಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲಾ ಮುಖ್ಯವಾಹಿನಿಗೆ ತರಲು ಸ್ಥಳೀಯ ಸರ್ಕಾರಗಳು ಕೈಗೊಳ್ಳಬೇಕಾದ ಕಾರ್ಯಕ್ರಮದ ಮಾರ್ಗಸೂಚಿಗಳ ಬಗ್ಗೆ ಸವಿವರವಾಗಿ ತಿಳಿಸಲಾಗಿದೆ. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲಾ ಮುಖ್ಯವಾಹಿನಿಗೆ ತರಲು The Karnataka Right of Children to Free and Compulsory Education Rules, 2012 ರನ್ವಯ ಗ್ರಾಮ ಪಂಚಾಯಿತಿಗಳು ಗ್ರಾಮ ಶಿಕ್ಷಣ ರಿಜಿಸ್ಟರ್‌ನ್ನು ನಿರ್ವಹಿಸಬೇಕಾಗಿರುತ್ತದೆ. ಈ ಬಗ್ಗೆ ಉಲ್ಲೇಖ (1) ರ ಸುತ್ತೋಲೆಯಲ್ಲಿ ಎಲ್ಲಾ ಗ್ರಾಮ ಪಂಚಾಯಿತಿಗಳು ಗ್ರಾಮ ಶಿಕ್ಷಣ ರಿಜಿಸ್ಟರ್ ನಿರ್ವಹಿಸಲು ತಿಳಿಸಲಾಗಿದೆ. The Karnataka Right of Children to Free and Compulsory Education (Amendment) Rules, 2014 ರನ್ವಯ ಮಕ್ಕಳ ಹಾಜರಾತಿಗೆ ಸಂಬಂಧಿಸಿದಂತೆ ಸ್ಥಳೀಯ ಸಂಸ್ಥೆಗಳು ನಿರ್ವಹಿಸಬೇಕಾದ ಜವಾಬ್ದಾರಿಗಳ ಬಗ್ಗೆ ತಿಳಿಸಲಾಗಿದೆ.

www.ksge.in

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 58 ರಲ್ಲಿ ಗ್ರಾಮ ಪಂಚಾಯಿತಿಯ ಪ್ರಕಾರ್ಯಗಳ ಬಗ್ಗೆ ವಿವರಿಸಲಾಗಿದ್ದು, ಅದರಲ್ಲಿ ಗ್ರಾಮ ಪಂಚಾಯಿತಿಯು ಪ್ರಾಥಮಿಕ ಶಾಲೆಗೆ ಮಕ್ಕಳ ಸಾರ್ವತ್ರಿಕ ದಾಖಲಾತಿಯನ್ನು ಖಚಿತಪಡಿಸಿಕೊಳ್ಳುವುದು ಪ್ರಮುಖವಾದ ಕಡ್ಡಾಯ ಕಾರ್ಯವಾಗಿರುತ್ತದೆ.

ಉಲ್ಲೇಖ (3) ರ ರಿಟ್ ಪಿಟಿಷನ್ ವಿಚಾರಣೆ ಸಂದರ್ಭದಲ್ಲಿ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ಈ ಕೆಳಕಂಡಂತೆ ಆದೇಶಿಸಿರುತ್ತದೆ.

**"We make it clear the responsibility of carrying out a door-to-door survey shall be of the local authorities and the task cannot be delegated to the teachers in the schools. While carrying out the survey, in case of students who have permanently abandoned the school, the registration number of the students can be of a great help. This aspect shall be borne in mind by the local authorities."**

Scanned by CamScanner

1) ಏಪ್ರಿಲ್‌-2020 – ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಸ್ಥಳೀಯ ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಅಧ್ಯಕ್ಷರು, ಶಾಲಾ ಮುಖ್ಯೋಪಾಧ್ಯಾಯರು, ಅಂಗನವಾಡಿ ಮೇಲ್ವಿಚಾರಕರು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಮತ್ತು ಮಹಿಳಾ ಸ್ವ-ಸಹಾಯ ಸಂಘದ ಪ್ರತಿನಿಧಿಗಳನ್ನು ಒಳಗೊಂಡಂತೆ ಸಭೆ ನಡೆಸಿ ಕಾರ್ಯಕ್ರಮದ ಮಹತ್ವವನ್ನು ಮನವರಿಕೆ ಮಾಡುವುದು.

2) ಮೇ-2020 – ಮೇಲ್ಕಂಡವರು ತಮ್ಮ ಶಾಲಾ ವ್ಯಾಪ್ತಿಯಲ್ಲಿ ಮಹಿಳಾ ಸ್ವ-ಸಹಾಯ ಸಂಘಗಳ ಪ್ರತಿನಿಧಿಗಳ ಮೂಲಕ ಸಮೀಕ್ಷೆ ನಡೆಸಿ ಶಾಲೆಗೆ ದಾಖಲಾಗದ, ದಾಖಲಾದರೂ ಹಾಜರಾಗದ ಮಕ್ಕಳನ್ನು ಗುರುತಿಸುವುದು. ವಿಶೇಷ ಮನವೊಲಿಕೆ ಕಾರ್ಯಕ್ರಮ ಅವಶ್ಯವಿದ್ದಲ್ಲಿ ಸಂಬಂಧಿಸಿದ ಶಾಲೆಯ ಮುಖ್ಯ ಶಿಕ್ಷಕರಿಂದ ಹಮ್ಮಿಕೊಳ್ಳುವುದು.

3) ಜೂನ್‌-2020 – ಮೇಲ್ಕಂಡಂತೆ ಸಮೀಕ್ಷೆಯಲ್ಲಿ ಗುರುತಿಸಲಾದ ಮಕ್ಕಳನ್ನು ಶಾಲೆಗೆ ದಾಖಲಿಸಲು ಹಾಗೂ ಹಾಜರಾಗುವಂತೆ ಮಾಡಲು ಕ್ರಮ ವಹಿಸುವುದು.

4) ಜುಲೈ-ಆಗಸ್ಟ್ 2020 – ಮೇಲ್ಕಂಡಂತೆ ದಾಖಲಿಸಲಾದ ಮಕ್ಕಳು ಹಾಜರಾಗುತ್ತಿರುವುದನ್ನು ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡವರು ಶಾಲೆಗೆ ಭೇಟಿ ನೀಡಿ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು.

5) ಸೆಪ್ಟೆಂಬರ್- 2020 – ಗ್ರಾಮ ಪಂಚಾಯಿತಿ ವತಿಯಿಂದ ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡವರೊಡನೆ ಸಭೆ ನಡೆಸಿ ಶಾಲೆಗೆ ದಾಖಲಾದ ಮಕ್ಕಳ ಹಾಜರಾತಿ ಹಾಗೂ ಶೈಕ್ಷಣಿಕ ಪ್ರಗತಿ ಬಗ್ಗೆ ಪರಿಶೀಲನೆ.

6) ಅಕ್ಟೋಬರ್-ನವೆಂಬರ್ – 2020 – ಮೇಲ್ಕಂಡಂತೆ ದಾಖಲಿಸಲಾದ ಮಕ್ಕಳು ಹಾಜರಾಗುತ್ತಿರುವುದನ್ನು ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡವರು ಶಾಲೆಗೆ ಭೇಟಿ ನೀಡಿ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು.

7) ಡಿಸೆಂಬರ್-2020 – ಗ್ರಾಮ ಪಂಚಾಯಿತಿ ವತಿಯಿಂದ ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡವರೊಡನೆ ಸಭೆ ನಡೆಸಿ ಶಾಲೆಗೆ ದಾಖಲಾದ ಮಕ್ಕಳ ಹಾಜರಾತಿ ಹಾಗೂ ಶೈಕ್ಷಣಿಕ ಪ್ರಗತಿ ಬಗ್ಗೆ ಪರಿಶೀಲನೆ ನಡೆಸುವುದು.

8) ಜನವರಿ-ಫೆಬ್ರವರಿ-2021 – ಮೇಲ್ಕಂಡಂತೆ ದಾಖಲಿಸಲಾದ ಮಕ್ಕಳು ಹಾಜರಾಗುತ್ತಿರುವುದನ್ನು ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡವರು ಶಾಲೆಗೆ ಭೇಟಿ ನೀಡಿ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು.

9) ಮಾರ್ಚ್- 2021 – ಗ್ರಾಮ ಪಂಚಾಯಿತಿ ವತಿಯಿಂದ ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡವರೊಡನೆ ಸಭೆ ನಡೆಸಿ ಶಾಲೆಗೆ ದಾಖಲಾದ ಮಕ್ಕಳ ಹಾಜರಾತಿ ಹಾಗೂ ಶೈಕ್ಷಣಿಕ ಪ್ರಗತಿ ಬಗ್ಗೆ ಪರಿಶೀಲನೆ ನಡೆಸುವುದು.

10) ಏಪ್ರಿಲ್‌-2021 ರಲ್ಲಿ ಇಡೀ ವರ್ಷದಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳ ದಾಖಲಾತಿ-ಹಾಜರಾತಿ ಪ್ರಕ್ರಿಯೆಯಲ್ಲಿ ಆದ ಪ್ರಗತಿ ಪರಾಮರ್ಶೆ ಮಾಡಿ ಮುಂದಿನ ವರ್ಷ ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಕಾರ್ಯಯೋಜನೆ ಸಿದ್ಧಪಡಿಸುವುದು.

11) ಗ್ರಾಮ ಪಂಚಾಯಿತಿಗಳು ಈ ಪ್ರಕ್ರಿಯೆಗೆ ತಗಲುವ ಸಾಂದರ್ಭಿಕ ವೆಚ್ಚಗಳನ್ನು ಗ್ರಾಮ ಪಂಚಾಯಿತಿ ಸ್ವಂತ ಸಂಪನ್ಮೂಲದಿಂದ ಭರಿಸುವುದು.

12) ಶಿಕ್ಷಣ ಇಲಾಖೆ ವತಿಯಿಂದ ಪ್ರತಿ ಗ್ರಾಮ ಪಂಚಾಯಿತಿಗೆ ನೀಡುವ ರೂ. 1,000/- ಗಳನ್ನು ಮಹಿಳಾ ಗ್ರಾಮ ಪಂಚಾಯತಿಗಳು ಆಯ್ಕೆ ಮಾಡಿದ ಮಹಿಳಾ ಸ್ವ-ಸಹಾಯ ಗುಂಪುಗಳ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟಕ್ಕೆ ಈ ಉದ್ದೇಶಕ್ಕಾಗಿ ಬಳಸಿಕೊಳ್ಳಲು ಬಿಡುಗಡೆ ಮಾಡವುದು.

13) ಶಾಲೆಯಿಂದ ಹೊರಗುಳಿದ ಮಕ್ಕಳ ದಾಖಲಾತಿ-ಹಾಜರಾತಿ ಪ್ರಕ್ರಿಯೆಯನ್ನು ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳು, ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೇಲುಸ್ತುವಾರಿ ಮಾಡಿ ನೆರವು, ಮಾರ್ಗದರ್ಶನ ನೀಡುವುದು.

14) ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಮೇಲುಸ್ತುವಾರಿ ಮಾಡಿ ನೆರವು; ಮಾರ್ಗದರ್ಶನ ನೀಡುವುದು, ಜಿಲ್ಲೆಯ ವ್ಯಾಪ್ತಿಯಲ್ಲಿ ಸಾಧಿಸಿದ ಪ್ರಗತಿಯನ್ನು ಒಗ್ಗೂಡಿಸಿ ಸರ್ಕಾರಕ್ಕೆ ವರದಿ ಮಾಡುವುದು.

Scanned by CamScanner

ಮೇಲೆ ವಿವರಿಸಿರುವಂತೆ, ಕ್ರಮಕೈಗೊಂಡು, ಭಾರತ ಸಂವಿಧಾನ, The Karnataka Right of Children to Free and Compulsory Education Rules, 2012 ಮತ್ತು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಆಶಯವನ್ನು, ಹಾಗೂ ಮಾನ್ಯ ಉಚ್ಛ ನ್ಯಾಯಾಲಯದ ಆದೇಶವನ್ನು ಪಾಲನೆ ಮಾಡುವ ಮೂಲಕ ಮಕ್ಕಳ ಶಿಕ್ಷಣದ ಹಕ್ಕನ್ನು ಜಾರಿಗೊಳಿಸಲು ಎಲ್ಲಾ ಗ್ರಾಮ ಪಂಚಾಯಿತಿಗಳು ಕಟ್ಟುನಿಟ್ಟಿನ ಕ್ರಮಕೈಗೊಳ್ಳಲು ತಿಳಿಸಿದೆ.

(ಎಸ್.ಆರ್. ಉಮಾಶಂಕರ್, ಭಾ.ಆ.ಸೇ.)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ

(ಉಮಾ ಮಹದೇವನ್, ಭಾ.ಆ.ಸೇ.)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

<u>ಗೆ:</u>

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು.
2) ಎಲ್ಲಾ ಉಪ ನಿರ್ದೇಶಕರುಗಳು, ಸಾರ್ವಜನಿಕ ಶಿಕ್ಷಣ ಇಲಾಖೆ.
3) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
4) ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ.
5) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

<u>ಪ್ರತಿ:</u>

1) ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು-1.
5) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
6) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
7) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿರವರು.
8) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
9) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

Scanned by CamScanner